ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ
ಶತಕದತ್ತ ಓಟ... ತೊಂಬತ್ತರ ನೋಟ

# ಪ್ರತಿವರ್ಷ ದಾಖಲೆ ಕೇಳುವುದು ಸರಿಯಲ್ಲ

**ಹುಬ್ಬಳ್ಳಿ:** ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಶಾಲಾ– ಕಾಲೇಜುಗಳ ಮಾನ್ಯತೆ ನವೀಕರಣಕ್ಕಾಗಿ ಪ್ರತಿವರ್ಷ ದಾಖಲೆಗಳನ್ನು ಕೇಳುವುದು ಸರಿಯಾದ ಕ್ರಮವಲ್ಲ ಎಂದು ಎಂದು ಆಕ್ಷೇಪ ವ್ಯಕ್ತಪಡಿಸಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಚಿವ ಮಧು ಬಂಗಾರಪ್ಪನವರಿಗೆ ಪತ್ರ ಬರೆದಿದ್ದಾರೆ. ಈ ಅವೈಜ್ಞಾನಿಕ ಪದ್ಧತಿಯನ್ನು ಸರಿಪಡಿಸಬೇಕು ಎಂದು ಸೂಚಿಸಿದ್ದಾರೆ.



**ಖಾಸಗಿ ಶಾಲಾ ಕಾಲೇಜು ಮಾನ್ಯತೆ ನವೀಕರಣ**

**ಪತ್ರದ ಸಾರಾಂಶ:** ಪ್ರತಿವರ್ಷ ಮಾನ್ಯತೆ ನವೀಕರಣಕ್ಕಾಗಿ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಯಲ್ಲಿ ಹಲವಾರು ಷರತ್ತುಗಳನ್ನು ವಿಧಿಸಲಾಗುತ್ತಿದೆ. ಉದಾಹರಣೆಗೆ ಲೋಕೋಪಯೋಗಿ ಇಲಾಖೆಗಳಿಂದ ಕಟ್ಟಡ ಸುರಕ್ಷಾ ಪ್ರಮಾಣಪತ್ರ ಹಾಗೂ ಅಗ್ನಿನಂದಕ ಅಳವಡಿಸಿರುವ ಕುರಿತು ಅಗ್ನಿಶಾಮಕ ಇಲಾಖೆ ಪ್ರಮಾಣಪತ್ರ ಮೊದಲಾದವುಗಳನ್ನು ಕೇಳುತ್ತಿರುವುದು ಸರಿಯಾದ ಕ್ರಮವಲ್ಲ ಎಂದಿದ್ದಾರೆ.


ಯಾಕೆಂದರೆ ಪುರಾತನ ಕಾಲದ ಕಟ್ಟಡಗಳಿಗೆ ಈ ಮಾಹಿತಿಯನ್ನು ಸಲ್ಲಿಸಿದ್ದು ಅದೇ ಮಾಹಿತಿಯನ್ನು ಪ್ರತಿ ಸಲ್ಲಿಸುವಂತೆ ಕೇಳುವುದು ಸಮಂಜಸವಾಗಿರುವುದಿಲ್ಲ. ಸರ್ಕಾರಿ ಶಾಲೆಗಳಿಗೆ ಇಲ್ಲದ ನಿಯಮಗಳು ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಿಗೆ ವಿಧಿಸುತ್ತಿರುವುದು ಸರಿಯಾದ ಪದ್ಧತಿ ಅಲ್ಲ ಎಂಬುದು ನನ್ನ ಅಭಿಪ್ರಾಯ ಎಂದು ಹೇಳಿದ್ದಾರೆ.

‘2006–07ರಲ್ಲಿ ನಾನು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವನಾಗಿದ್ದಾಗ ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಆದೇಶ ಹೊರಡಿಸಿದ್ದೆ. ಪ್ರತಿ 5 ವರ್ಷಕ್ಕೊಮ್ಮೆ 10 ವರ್ಷಕ್ಕೊಮ್ಮೆ, 15 ವರ್ಷಕ್ಕೊಮ್ಮೆ ತದನಂತರ ಶಾಶ್ವತ ಮಾನ್ಯತೆ ನವೀಕರಣ ನೀಡುವ ಕುರಿತು ಈ ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಒಂದೆರಡು ವರ್ಷ ಈ ಆದೇಶವನ್ನು ಪಾಲಿಸಿದ ಶಿಕ್ಷಣ ಇಲಾಖೆ ತದನಂತರ ಮತ್ತೆ ಪ್ರತಿವರ್ಷ ಮಾನ್ಯತೆ ನವೀಕರಣಕ್ಕಾಗಿ ಪ್ರಸ್ತಾವನೆ ಸಲ್ಲಿಸಲು ಸೂಚಿಸುತ್ತಿದೆ. ಯಾವುದಕ್ಕಾಗಿ ಎಂಬುದು ಅರ್ಥವಾಗದ ಪ್ರಶ್ನೆ ನನ್ನನ್ನು ಇಲ್ಲಿಯವರೆಗೆ ಕಾಡಿದ್ದುಂಟು’ ಎಂದು ಹೊರಟ್ಟಿ ಬೇಸರ ವ್ಯಕ್ತಪಡಿಸಿದ್ದಾರೆ.

‘ತಾವು ಈ ಕುರಿತು ಸಭೆ ಕರೆದು 2006–07ರ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಮಾಡಲು ಸೂಚಿಸಬೇಕು ಎಂದು ಶಿಕ್ಷಣ ಸಚಿವರನ್ನು ಹೊರಟ್ಟಿಯವರು ಕೋರಿದ್ದಾರೆ.

# ಖಾಸಗಿ ಶಿಕ್ಷಣ ಸಂಸ್ಥೆಗಳ ಮಾನ್ಯತೆ ನವೀಕರಣ ಪ್ರತಿವರ್ಷ ದಾಖಲೆ ಕೇಳುವುದು ಸರಿಯಲ್ಲ : ಹೊರಟ್ಟಿ.

**ಗದಗ ಸಂಜೆ ವಾರ್ತೆ :**



ಹುಬ್ಬಳ್ಳಿ : ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಶಾಲಾ ಕಾಲೇಜುಗಳ ಮಾನ್ಯತೆ ನವೀಕರಣಕ್ಕಾಗಿ ಪ್ರತಿವರ್ಷ ದಾಖಲೆಗಳನ್ನು ಕೇಳವುದು ಸರಿಯಾದ ಕ್ರಮವಲ್ಲವೆಂದು ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರಾದ ಮಧು ಬಂಗಾರಪ್ಪನವರಿಗೆ ಸಭಾಪತಿ ಬಸವರಾಜ ಹೊರಟ್ಟಿಯವರು ಪತ್ರಬರೆದು ಈ ಅವೈಜ್ಞಾನಿಕ ಪದ್ಧತಿಯನ್ನು ಸರಿಪಡಿಸಲು ಒತ್ತಾಯಿಸಿದ್ದಾರೆಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.

ಸಚಿವರಿಗೆ ಬರೆದ ಸುಧೀರ್ಘ ಪತ್ರದಲ್ಲಿ ಪ್ರತಿವರ್ಷ ಮಾನ್ಯತೆ ನವೀಕರಣಕ್ಕಾಗಿ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಯಲ್ಲಿ ಹಲವಾರು ಷರತ್ತುಗಳನ್ನು ವಿಧಿಸಲಾಗುತ್ತಿದೆ. ಉದಾಹರಣೆಗೆ ಲೋಕೋಪಯೋಗಿ ಇಲಾಖೆಗಳಿಂದ ಕಟ್ಟಡ ಸುರಕ್ಷಾ ಪ್ರಮಾಣಪತ್ರ ಹಾಗೂ ಅಗ್ನಿನಂದಕ ಅಳವಡಿಸಿರುವ ಕುರಿತು ಅಗ್ನಿಶಾಮಕ ಇಲಾಖೆ ಪ್ರಮಾಣಪತ್ರ ಮೊದಲಾದವುಗಳನ್ನು ಕೇಳುತ್ತಿರುವುದು ಸರಿಯಾದ ಕ್ರಮವಲ್ಲ ಏಕೆಂದರೆ ಪುರಾತನ ಕಾಲದ ಕಟ್ಟಡಗಳಿಗೆ ಈ ಮಾಹಿತಿಯನ್ನು ಸಲ್ಲಿಸಿದ್ದು ಅದೇ ಮಾಹಿತಿಯನ್ನು ಪ್ರತಿ ಸಲ್ಲಿಸುವಂತೆ ಕೇಳುವುದು ಸಮಂಜಸವಾಗಿರುವುದಿಲ್ಲ. ಹಾಗೂ ಸರ್ಕಾರಿ ಶಾಲೆಗಳಿಗೆ ಇಲ್ಲದ ನಿಯಮಗಳು ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಿಗೆ ವಿಧಿಸುತ್ತಿರುವುದು ಸರಿಯಾದ ಪದ್ಧತಿ ಅಲ್ಲ ಎಂಬುದು ನನ್ನ ವಿಚಾರ.

2006–07ರಲ್ಲಿ ನಾನು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವನಾಗಿದ್ದಾಗ ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಒಂದು ಆದೇಶವನ್ನು ಹೊರಡಿಸಿದ್ದೆ ಪ್ರತಿ 5 ವರ್ಷಕ್ಕೊಮ್ಮೆ 10 ವರ್ಷಕ್ಕೊಮ್ಮೆ, 15 ವರ್ಷಕ್ಕೊಮ್ಮೆ ತದನಂತರ ಶಾಶ್ವತ ಮಾನ್ಯತೆ ನವೀಕರಣ ನೀಡುವ ಕುರಿತು ಈ ಆದೇಶದಲ್ಲಿ ತಿಳಿಸಲಾಗಿತ್ತು ಒಂದೆರಡು ವರ್ಷ ಈ ಆದೇಶವನ್ನು ಪಾಲಿಸಿದ ಶಿಕ್ಷಣ ಇಲಾಖೆ ತದನಂತರ ಮತ್ತೆ ಪ್ರತಿವರ್ಷ ಮಾನ್ಯತೆ ನವೀಕರಣಕ್ಕಾಗಿ ಪ್ರಸ್ತಾವನೆ ಸಲ್ಲಿಸಲು ಸೂಚಿಸುತ್ತಿರುವುದು ಯಾವುದಕ್ಕಾಗಿ ಎಂಬುದು ಅರ್ಥವಾಗದ ಪ್ರಶ್ನೆ ನನ್ನನ್ನು ಇಲ್ಲಿಯವರೆಗೆ ಕಾಡಿದ್ದುಂಟು. ತಾವು ಈ ಕುರಿತು ಸಭೆ ಕರೆದು 2006–07ರ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಮಾಡಲು ಸೂಚಿಸಬೇಕೆಂದು ಶಿಕ್ಷಣ ಸಚಿವರನ್ನು ಹೊರಟ್ಟಿಯವರು ಕೋರಿದ್ದಾರೆಂದು ಡಾ.ಬಸವರಾಜ ಧಾರವಾಡ ತಿಳಿಸಿದ್ದಾರೆ.